ಪೊಲೀಸ್ ವಸತಿ ಗೃಹಗಳ ಕೊರತೆ

2299 (363); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

ಅ) ಮಧುಗಿರಿ ತಾಲ್ಲೂಕಿನ ಪೊಲೀಸ್ ಸಿಬ್ಬಂದಿಗೆ ವಸತಿ ಗೃಹಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕೊರತೆಯಿರುವ ವಸತಿ ಗೃಹಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ ಯಾವಾಗ ನಿರ್ಮಾಣ ಮಾಡಲಾಗುವುದು? (ವಿವರ ನೀಡುವುದು)

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಮಧುಗಿರಿ ತಾಲ್ಲೂಕಿನ 150 ಪೊಲೀಸ್ ಅಧಿಕಾರಿ/ಸಿಬ್ಬಂದಿಗಳಲ್ಲಿ 68 ಜನರಿಗೆ ವಸತಿಗೃಹಗಳನ್ನು ಒದಗಿಸಲಾಗಿದ್ದು 82 ವಸತಿಗೃಹಗಳ ಕೊರತೆ ಇದೆ. ಪೊಲೀಸ್ ಗೃಹ 2020 ಯೋಜನೆಯಡಿಯಲ್ಲಿ ಮಧುಗಿರಿ ತಾಲ್ಲೂಕಿನ ಬಡವನಹಳ್ಳಿಯಲ್ಲಿ 24 ವಸತಿಗೃಹ ಮತ್ತು ಕೊಡಿಗೇನಹಳ್ಳಿಯಲ್ಲಿ 36 ವಸತಿಗೃಹಗಳನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ.

ಇ) ಅನುದಾನದ ಲಭ್ಯತೆಗನುಗುಣವಾಗಿ ಮುಂದಿನ ಆರ್ಥಿಕ ವರ್ಷಗಳಲ್ಲಿ ಆದ್ಯತೆ ಮೇರೆಗೆ ವಸತಿಗೃಹಗಳ ನಿರ್ಮಾಣವನ್ನು ಕೈಗೊಳ್ಳಲಾಗುವುದು.